ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಶಿಕ್ಷಣ ಇಲಾಖೆಯ ಕ್ಷೇತ್ರ ಸಮನ್ವಯಾಧಿಕಾರಿಯ ದುರ್ನಡತೆ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

79 (77) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಕ್ಷೇತ್ರ ಸಮನ್ವಯಾಧಿಕಾರಿ ಇವರು ತಮ್ಮ ಕರ್ತವ್ಯ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೀರಾ ಅನುಚಿತ ವರ್ತನೆ ತೋರುತ್ತಿರುವ ಬಗ್ಗೆ ಜೋಯಿಡಾ ತಾಲ್ಲೂಕಿನ ಎಲ್ಲಾ ಇಲಾಖೆಯ ಸರ್ಕಾರಿ ನೌಕರರು ಹಾಗೂ ಪತ್ರಿಕಾ ವರದಿಗಾರರು ಮತ್ತು ಸಾರ್ವಜನಿಕರು ಆಕ್ರೋಶ ವ್ಯಕ್ತ ಪಡಿಸಿ ಪ್ರತಿಭಟಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಸಿಬ್ಬಂದಿ ಜೋಯಿಡಾ ತಾಲ್ಲೂಕಿನ ಶಿಕ್ಷಕರ ಸಿ.ಆರ್.ಪಿ/ಬಿ.ಆರ್.ಪಿಗಳ ಸಭೆಗಳಲ್ಲಿ ತೀರಾ ಕ್ಷುಲ್ಲಕವಾಗಿ ಅವಹೇಳನಕಾರಿಯಾಗಿ ಮಾತನಾಡುವುದು ಹಾಗೂ ಯಾವುದೇ ಅಧಿಕಾರಿ ವರ್ಗದವರಿಗೆ ಗೌರವ ನೀಡದೆ ಬೇಜವಾಬ್ದಾರಿತನದಿಂದ ವರ್ತಿಸುವುದು, ಶಿಕ್ಷಕ ವೃಂದದವರಿಗೆ ಹಾಗೂ ಸಂಬಂಧಿಸಿದ ಸಿಬ್ಬಂದಿಗಳಿಗೆ ಅಸಂವಿಧಾನಿಕ ಪದಗಳನ್ನು ಬಳಸಿ ನಿಂದಿಸುವುದನ್ನು ತನಿಖೆ ಮಾಡಿ ಶಿಕ್ಷಕರ/ಸಾರ್ವಜನಿಕರ ಹಿತ ದೃಷ್ಟಿಯಿಂದ ಇವರನ್ನು ಕೂಡಲೇ ಜಿಲ್ಲೆಯಿಂದ ಬೇರೆಡೆಗೆ ವರ್ಗಾವಣೆ ಮಾಡುವುದಲ್ಲದೆ ಅವರ ಅವಧಿಯಲ್ಲಿನ ಲಕ್ಷಾಂತರ ರೂಪಾಯಿಯ ಅವ್ಯವಹಾರದ ತನಿಖೆ ಮಾಡಲಾಗುವುದೇ ? (ವಿವರ ನೀಡುವುದು)